ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಬೀದರ್ ಸಹಕಾರ ಸಕ್ಕರೆ ಕಾರ್ಖಾನೆಗಳ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

878 (909) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ನಿಲುವೇನು;

(ಆ) ಬೀದರ್ ಸಕ್ಕರೆ ಕಾರ್ಖಾನೆ ಸ್ಥಗಿತಗೊಂಡು ಲಕ್ಷಾಂತರ ರೈತ ಹಾಗೂ ಕಾರ್ಮಿಕ ಕುಟುಂಬದವರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನೀಡಲಾದ ಪರಿಹಾರ ಏನು;

(ಇ) ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ಮುಚ್ಚುವ ಅಥವಾ ಪುನರಾರಂಭಕ್ಕೆ ಸರ್ಕಾರದ ನಿಲುವೇನು;

(ಈ) ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ಪುನರಾರಂಭಿಸದಿದ್ದಲ್ಲಿ, ಹೊಸ ಕಾರ್ಖಾನೆ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು)

(ಉ) ಬೀದರ್ ಸಕ್ಕರೆ ಕಾರ್ಖಾನೆಯನ್ನು ಲೀಜ್‌ಗೆ ನೀಡುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ, ಲೀಜ್ ನೀಡುವ ಉದ್ದೇಶ ಎಷ್ಟು ದಿನಗಳಲ್ಲಿ ಪೂರ್ಣಗೊಳ್ಳಲಿದೆ; ಎಷ್ಟು ದಿನಗಳಲ್ಲಿ ಪುನರಾರಂಭಕ್ಕೆ ಕ್ರಮ ಕೈಗೊಳ್ಳಲಾಗುವುದು?